ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/05/ಇಎಪಿ/2023

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 27-11-2023.

## ಜ್ಞಾಪನ

ವಿಷಯ: 2009-2010 ರಿಂದ 2014-15 ನೇ ಸಾಲಿನವರೆಗೆ ವಿವಿಧ ಡಿಪ್ಲೋಮಾ ಕೋರ್ಸುಗಳಿಗೆ ಮೊದಲನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12 ರಿಂದ 2015-16ನೇ ಸಾಲಿನವರೆಗೆ ವಿವಿಧ ಡಿಪ್ಲೋಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಸಿ-09 ಪಠ್ಯಕ್ರಮದಲ್ಲಿ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಮತ್ತು 2016-17 ಹಾಗೂ 2017-18 ನೇ ಶೈಕ್ಷಣಿಕ ಸಾಲಿನಲ್ಲಿ ಸಿ-15 ಪಠ್ಯಕ್ರಮದಲ್ಲಿ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 150 ಡಿಟಿಇ 2023, ದಿ:24-11-2023.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ (1)ರ ಸರ್ಕಾರದ ಪತ್ರದಲ್ಲಿ 2009-10 ನೇ ಸಾಲಿನಿಂದ 2014-15 ನೇ ಶೈಕ್ಷಣಿಕ ಸಾಲಿನವರೆಗೆ ಮೊದಲನೇ ವರ್ಷದ (ಸಿ-09 ಪಠ್ಯಕ್ರಮ) ಡಿಪ್ಲೋಮಾಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಹಾಗೂ 2011-12 ರಿಂದ 2015-16ನೇ ಸಾಲಿನವರೆಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ(ಸಿ-09 ಪಠ್ಯಕ್ರಮ) ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಮತ್ತು 2016-17 ಹಾಗೂ 2017-18ನೇ ಶೈಕ್ಷಣಿಕ ಸಾಲಿನಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ (ಸಿ-15 ಪಠ್ಯಕ್ರಮ) ಎರಡನೇ ವರ್ಷಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023-24ನೇ ಶೈಕ್ಷಣಿಕ ಸಾಲಿನ 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಸರ್ಕಾರದ ಅನುಮತಿ ನೀಡಲಾಗಿದೆ.

ಮೇಲ್ಕಂಡ ಸರ್ಕಾರದ ಅನುಮತಿ ಹಿನ್ನೆಲೆಯಲ್ಲಿ ಸದರಿ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ದಿ: 02-12-2023ರ ತನಕ (ದಂಡರಹಿತವಾಗಿ) ನಿಯಮಾನುಸಾರ ಪರೀಕ್ಷಾ ಶುಲ್ಕವನ್ನು ಪಾವತಿಸಿ ಪರೀಕ್ಷೆಗೆ ನೋಂದಾಯಿಸಲು ತಿಳಿಸಲಾಗಿದೆ. ಪ್ರಯುಕ್ತ ಈ ಕುರಿತು ಮಾಧ್ಯಮಗಳ ಮೂಲಕ ಪ್ರಕಟಿಸಲು ಮತ್ತು ಪೋಷಕರ ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರಲು ಸೂಚಿಸಲಾಗಿದೆ.

ಮೇಲೆ ತಿಳಿಸಿರುವ ದಿನಾಂಕದ ನಂತರ ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಲಾಗುವುದಿಲ್ಲವೆಂದು ಸ್ಪಷ್ಟವಾಗಿ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ
27/11/23

ಇವರಿಗೆ: ರಾಜ್ಯದ ಎಲ್ಲಾ ಪಾಲಿಟೆಕ್ನಿಕ್ ಗಳ ಪ್ರಾಚಾರ್ಯರುಗಳ ಮಾಹಿತಿಗಾಗಿ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸುವ ಸಲುವಾಗಿ.

ಪ್ರತಿ:

1. ಆಪ್ತಶಾಖೆ, ಮಾನ್ಯ ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಆಪ್ತಶಾಖೆ, ಮಾನ್ಯ ನಿರ್ದೇಶಕರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಇ-ಗವರ್ನೆನ್ಸ್ ವಿಭಾಗ - ವೆಬ್ ಸೈಟ್ ನಲ್ಲಿ ಪ್ರಕಟಿಸಲು
4. ಇ.ಸಿ.ಎಸ್.ವಿಭಾಗ.